## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ಹಾವೇರಿ ಜಿಲ್ಲೆ ರಾಣಿಬೆನ್ನೂರು ವಿಧಾನಸಭಾ ಕ್ಷೇತ್ರದ ಕಾಕೋಳ ಗ್ರಾಮವನ್ನು ಹೆಚ್ಚುವರಿಯಾಗಿ ಆಯ್ಕೆ ಮಾಡಿ ಅನುಮೋದಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ: 2014 ದಿ:20.10.2014.
2. ಅಧ್ಯಕ್ಷರು, ಕಾಕೋಳ ಗ್ರಾಮ ಪಂಚಾಯತ್, ರಾಣಿಬೆನ್ನೂರ ತಾಲ್ಲೂಕು, ಹಾವೇರಿ ಜಿಲ್ಲೆ ಇವರ ಪತ್ರ ಸಂಖ್ಯೆ: ಗ್ರಾಪಂಕಾ/2016 -17 ದಿ: 27.11.2016.

***

**ಪ್ರಸ್ತಾವನೆ:**

ಗ್ರಾಮ ವಿಕಾಸ ಯೋಜನೆಯಡಿ ರಾಜ್ಯದ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಗ್ರಾಮಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ್ದು, ಸದರಿ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ಕುರಿತು ವಿವರವಾಗಿ ಮೇಲೆ ಓದಲಾದ (1) ರ ಸರ್ಕಾರದ ಆದೇಶವನ್ನು ಹೊರಡಿಸಿ ಅದರಂತೆ ಮಾರ್ಗಸೂಚಿಯನ್ನು ಹೊರತರಲಾಗಿದೆ.

ಓದಲಾದ (2) ರಲ್ಲಿ ಅಧ್ಯಕ್ಷರು, ಕಾಕೋಳ ಗ್ರಾಮ ಪಂಚಾಯತ್, ರಾಣಿಬೆನ್ನೂರ ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ ಗ್ರಾಮಸ್ಥರ ಹಿತದೃಷ್ಟಿಯಿಂದ ಕಾಕೋಳ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಉಳಿಕೆಯ ಮೊತ್ತದಲ್ಲಿ ಹೆಚ್ಚುವರಿಯಾಗಿ ಸೇರ್ಪಡೆ ಮಾಡಿ ಅಭಿವೃದ್ಧಿಪಡಿಸಲು ಕೋರಿರುವ ಪ್ರಸ್ತಾವನೆಯನ್ನು ಸರ್ಕಾರ ಪರಿಶೀಲಿಸಿದೆ ಮತ್ತು ಗ್ರಾಮ ವಿಕಾಸ ಯೋಜನೆಯಡಿ ಉಳಿಕೆಯ ಮೊತ್ತದಲ್ಲಿ ಹೆಚ್ಚುವರಿಯಾಗಿ ಸೇರ್ಪಡೆ ಮಾಡಿ ಕಾಕೋಳ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ.

ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ : 08 : ಗ್ರಾವಿಯೋ : 2017. ಬೆಂಗಳೂರು, ದಿನಾಂಕ 25.03.2017**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಹಾವೇರಿ ಜಿಲ್ಲೆ ರಾಣಿಬೆನ್ನೂರ ವಿಧಾನಸಭಾ ಕ್ಷೇತ್ರದ ಕಾಕೋಳ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಉಳಿತಾಯವಾಗಬಹುದಾದ ಮೊತ್ತದಲ್ಲಿ ಪರಿಗಣಿಸಿ ಯೋಜನೆಯಡಿ ಹೆಚ್ಚುವರಿಯಾಗಿ ಸೇರ್ಪಡೆ ಮಾಡಿ ರೂ. 75.00 ಲಕ್ಷಗಳ ಅನುದಾನದಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಗ್ರಾಮ ವಿಕಾಸ ಯೋಜನೆ ಮಾರ್ಗಸೂಚಿಯಂತೆ ಮತ್ತು ಸರ್ಕಾರ ಹೊರಡಿಸಿದ ಸುತ್ತೋಲೆಗಳ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ.ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಯನ್ನು ಮಾಹಿತಿಗಾಗಿ:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು

2. ಮಹಾಲೇಖಪಾಲರು (ಆಡಿಟ್-1& 2) ಕರ್ನಾಟಕ, ಬೆಂಗಳೂರು
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌದ, ಬೆಂಗಳೂರು.
4. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಹಾವೇರಿ ಜಿಲ್ಲೆ.
9. ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಜಿಲ್ಲಾ ಖಜಾನಾಧಿಕಾರಿಗಳು, ಹಾವೇರಿ ಜಿಲ್ಲೆ.
14. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
16. ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ ಜಿಲ್ಲೆ.
17. ಮುಖ್ಯಸ್ಥರು, ಗಣಕ ಕೋಶ, ಗ್ರಾ ಮತ್ತು ಪಂ.ರಾಜ್. ಇಲಾಖೆ ಇವರಿಗೆ ಇಲಾಖಾ ವೈಬ್‌ಸೈಟ್‌ನಲ್ಲಿ ಅಳವಡಿಸಲು.
18. ಸಂಪಾದಕರು, ಕರ್ನಾಟಕ ವಿಕಾಸ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು
19. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.